# ಡ್ರಗ್ಸ್ ನಿಷೇಧಕ್ಕೆ ಸುಗ್ರೀವಾಜ್ಞೆ



ಬೆಂಗಳೂರು: ರಾಜ್ಯದಲ್ಲಿ ಅಕ್ರಮ ಡ್ರಗ್ಸ್ ಮಾರಾಟ ಹಾಗೂ ತಂಬಾಕು, ಗುಟ್ಕಾ
ಮಾರಾಟ ಮತ್ತು ವಿತರಣೆ ನಿಯಂತ್ರಿಸಲು ಒಂದು ವಾರದಲ್ಲಿ ರಾಜ್ಯ ಸರ್ಕಾರ
ಸುಗ್ರೀವಾಜ್ಞೆ ಹೊರಡಿಸಲಿದೆ ಎಂದು ಮುಖ್ಯಮಂತ್ರಿಗಳ ಹೆಚ್ಚುವರಿ ಮುಖ್ಯ
ಕಾರ್ಯದರ್ಶಿ ಇ.ವಿ.ರಮಣ ರೆಡ್ಡಿ ಹಾಗೂ ಆರೋಗ್ಯ ಇಲಾಖೆ ಹೆಚ್ಚುವರಿ ಮುಖ್ಯ
ಕಾರ್ಯದರ್ಶಿ ಜಾವೇದ್ ಅಕ್ತರ್ ರಾಜ್ಯಪಾಲ ವಜುಭಾಯಿ ವಾಲಾರಿಗೆ ತಿಳಿಸಿದ್ದಾರೆ.
ಗುರುವಾರ ಇಬ್ಬರೂ ಅಧಿಕಾರಿಗಳು ರಾಜಭವನದಲ್ಲಿ ರಾಜ್ಯಪಾಲರನ್ನು ಭೇಟಿ
ಮಾಡಿ ಈ ಮಾಹಿತಿ ನೀಡಿದರು.

ಜುಲೈ-31 ರಂದು ತಂಬಾಕು, ಗುಟ್ಕಾ ಹಾಗೂ ತಂಬಾಕು ಮಿಶ್ರಿತ ಉತ್ಪನ್ನಗಳ
ಮಾರಾಟ ಹಾಗೂ ವಿತರಣೆ ಕುರಿತು ಮುಖ್ಯಮಂತ್ರಿ ಯಡಿಯೂರಪ್ಪ ಹಾಗೂ ಗೃಹ
ಸಚಿವ ಬಸವರಾಜ ಬೊಮ್ಮಾಯಿ ಅವರೊಂದಿಗೆ ರಾಜ್ಯಪಾಲರು ನಡೆಸಿದ್ದ ಸಭೆಯ
ಹಿನ್ನೆಲೆಯಲ್ಲಿ ರಾಜ್ಯಪಾಲರಿಗೆ ಪ್ರಗತಿಯ ವರದಿ ಸಲ್ಲಿಸಿದ್ದಾರೆ. ಅಲ್ಲದೇ ಡ್ರಗ್ಸ್
ಮಾರಾಟ ಜಾಲ ಪತ್ತೆ ಹಚ್ಚಿ ಕ್ರಮ ಕೈಗೊಳ್ಳುತ್ತಿರುವುದು ಹಾಗೂ ಗಾಂಜಾ ವಶ
ಪಡಿಸಿಕೊಂಡಿರುವ ಬಗ್ಗೆ ರಾಜ್ಯಪಾಲರಿಗೆ ತಿಳಿಸಿದ್ದಾರೆ.

# ಡ್ರಗ್ಸ್ ಕೇಸ್: ನಟಿ ಸ್ನೇಹಿತನ ವಿಚಾರಣೆ

ಬೆಂಗಳೂರು: ಸ್ಯಾಂಡಲ್‌ವುಡ್ ಡ್ರಗ್ಸ್ ದಂಧೆ ಕೇಸ್‌ನ ತನಿಖೆ ಮುಂದುವರಿಸಿರುವ
ಸಿಸಿಬಿ ಪೊಲೀಸರು ಗುರುವಾರ ಆರೋಪಿ ಆದಿತ್ಯಾ ಆಳ್ವಾನ ಜತೆ ಪಾರ್ಟಿ ಮಾಡಿದ್ದ
ಮತ್ತು ನಟಿಯೊಬ್ಬರ ಸ್ನೇಹಿತ ಲೋಕೇಶ್ ಎಂಬಾತನನ್ನು ವಿಚಾರಣೆ ನಡೆಸಿದರು.
ಚಾಮರಾಜಪೇಟೆಯಲ್ಲಿರುವ ಸಿಸಿಬಿ ಕಚೇರಿಯಲ್ಲಿ ಲೋಕೇಶ್ ಅವರನ್ನು
ತನಿಖಾಧಿಕಾರಿಗಳು ಸತತ ವಿಚಾರಣೆ ನಡೆಸಿದರು. ಆರೋಪಿ ಆದಿತ್ಯ ಆಳ್ವಾ ಜತೆ
ಪಾರ್ಟಿಯಲ್ಲಿ ಪಾಲ್ಗೊಂಡಿದ್ದರೇ? ಜತೆಗೆ ನಿಮ್ಮಿಬ್ಬರಿಗೂ ಎಷ್ಟು ವರ್ಷ ಸ್ನೇಹತ್ವವಿದೆ
ಎಂಬಿತ್ಯಾದಿ ಪ್ರಶ್ನೆಗಳನ್ನು ತನಿಖಾಧಿಕಾರಿಗಳು ಕೇಳಿ ಲಿಖಿತ ಉತ್ತರ ಪಡೆದಿದ್ದಾರೆ.
ಅಷ್ಟೇ ಅಲ್ಲದೆ ಲಾಕ್‌ಡೌನ್ ಅವಧಿಯಲ್ಲಿ ನಟಿಯೊಬ್ಬರ ಜತೆ ಕಾರಿನಲ್ಲಿ
ಹೋಗುತ್ತಿದ್ದಾಗ ಹೈಗ್ರೌಂಡ್ಸ್ ಠಾಣಾ ವ್ಯಾಪ್ತಿಯಲ್ಲಿ ಅಪಘಾತ ಆಗಿದ್ದ ಪ್ರಕರಣದ
ಬಗ್ಗೆಯೂ ಮಾಹಿತಿ ಪಡೆದುಕೊಳ್ಳಲಾಗಿದೆ ಎಂದು ಮೂಲಗಳು ತಿಳಿಸಿವೆ.

**ರೈ ವಿಚಾರಣೆ ಮುಂದಕ್ಕೆ!:** ಡ್ರಗ್ಸ್ ದಂಧೆ ಕೇಸ್‌ನ ಆರೋಪಿಗಳಿಗೆ ಸಹಾಯ
ಮಾಡಿರುವ ಆರೋಪ ಎದುರಿಸುತ್ತಿರುವ ದಿವಂಗತ ಮುತ್ತಪ್ಪ ರೈ ಪುತ್ರ ರಿಕ್ಕಿ
ವಿಚಾರಣೆಯನ್ನು ಸಿಸಿಬಿ ಪೊಲೀಸರು ಮುಂದೂಡಿದ್ದಾರೆ. ಗುರುವಾರ ವಿಚಾರಣೆಗೆ
ಹಾಜರಾಗುವಂತೆ ಸೂಚನೆ ನೀಡಲಾಗಿತ್ತು. ಆದರೆ, ಕೆಲವು ತಾಂತ್ರಿಕ ಕಾರಣಗಳಿಂದ
ವಿಚಾರಣೆ ಮುಂದೂಡಲಾಯಿತು ಎಂದು ಮೂಲಗಳು ಹೇಳಿವೆ. ರಿಕ್ಕಿ ರೈ ಅವರ
ಮೊಬೈಲ್ ಎಫ್‌ಎಸ್‌ಎಲ್‌ಗೆ ಕಳುಹಿಸಿದ್ದು ಆದರ ರಿಟ್ರೀವ್ ವರದಿ ಇನ್ನೂ ಬರಬೇಕಿದೆ.